# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1011 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24/02/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ನೋಂದಾಯಿತ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು; ಈ ಕಟ್ಟಡ ಕಾರ್ಮಿಕರಿಗೆ ಸರ್ಕಾರವು ನೀಡುತ್ತಿರುವ ಸೌಲಭ್ಯಗಳು ಯಾವುವು; | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಫಲಾನುಭವಿಗಳಾಗಿ **32,92,607** ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ನೋಂದಣಿಯಾಗಿರುತ್ತಾರೆ. ಜಿಲ್ಲಾವಾರು ವಿವರವನ್ನು **ಅನುಬಂಧ-01** ರಲ್ಲಿ ಲಗತ್ತಿಸಿದೆ.<br><br>ಮಂಡಳಿಯ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುತ್ತಿದೆ. ಸೌಲಭ್ಯಗಳ ವಿವರವನ್ನು **ಅನುಬಂಧ -02** ರಲ್ಲಿ ಲಗತ್ತಿಸಿದೆ. |
| ಆ) | ಕಟ್ಟಡ ಕಾರ್ಮಿಕರಿಗೆ ಉಚಿತವಾಗಿ ನೀಡುತ್ತಿರುವ ಬಸ್‌ಪಾಸ್‌ನ ನವೀಕರಣಕ್ಕೆ ಅವಕಾಶ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಹಿಂದೆ ಎಷ್ಟು ಅವಧಿಗೆ ಬಸ್‌ಪಾಸ್ ನವೀಕರಿಸಲಾಗುತ್ತಿದೆ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ ಮಂಡಳಿಯ ನೋಂದಾಯಿತ ಕಾರ್ಮಿಕರ ಸದಸ್ಯತ್ವ ಅವಧಿ ಚಾಲ್ತಿಯಲ್ಲಿರುವುದನ್ನು ಆಧಾರಿಸಿ ಗರಿಷ್ಠ ಮೂರು ತಿಂಗಳ ಅವಧಿಯ ಬಸ್‌ಪಾಸ್ ಅನ್ನು ವಿತರಿಸಲಾಗುತ್ತಿದೆ. ಈ ಬಸ್‌ಪಾಸ್ ಅವಧಿ ಮುಕ್ತಾಯದ ನಂತರ ಹೊಸದಾಗಿ ಅರ್ಜಿ ಸಲ್ಲಿಸಿ ಬಸ್‌ಪಾಸ್ ಪಡೆಯಬೇಕಿರುತ್ತದೆ. ನವೀಕರಣಕ್ಕೆ ಅವಕಾಶವಿರುವುದಿಲ್ಲ. ಯೋಜನೆಯ ಪ್ರಾರಂಭದಿಂದಲೂ ಸಹ ಬಸ್‌ಪಾಸಿಗಾಗಿ ಪ್ರತಿ ಬಾರಿ ಅರ್ಜಿ ಸಲ್ಲಿಸಿ ಪಡೆದುಕೊಳ್ಳುತ್ತಿದ್ದು, ಬಸ್‌ಪಾಸ್ ಪಡೆಯಲು ಫಲಾನುಭವಿಯ ನೋಂದಣಿ ಸದಸ್ಯತ್ವ ಕಡ್ಡಾಯವಾಗಿ ಚಾಲ್ತಿಯಲ್ಲಿರಬೇಕಿರುವುದರಿಂದ ನವೀಕರಣ ವ್ಯವಸ್ಥೆ ಇರುವುದಿಲ್ಲ. |
| ಇ) | ನೋಂದಾಯಿತ ಕಾರ್ಮಿಕರಿಗೆ ಸರ್ಕಾರವು ಈ ಹಿಂದೆ ನೀಡಿರುವ ಬಸ್‌ಪಾಸ್‌ನಿಂದ ಪ್ರಸ್ತುತ ಎಷ್ಟು ಜನ ವಂಚಿತರಾಗಿದ್ದಾರೆ? | ಮಂಡಳಿಯ ನೋಂದಾಯಿತ ಕಾರ್ಮಿಕರ ಪೈಕಿ ಕೆಲಸದ ನಿಮಿತ್ತ ಪ್ರಯಾಣಿಸಲು ಬಸ್‌ಪಾಸ್ ಅವಶ್ಯಕತೆ ಇರುವವರು ಅರ್ಜಿ ಸಲ್ಲಿಸಿ ಬಸ್‌ಪಾಸ್ ಪಡೆದಿರುತ್ತಾರೆ. ಮಂಡಳಿಯ ಯೋಜನೆಯ ಅನುದಾನಕ್ಕೆ ಅನುಗುಣವಾಗಿ ಅರ್ಜಿಗಳನ್ನು ಸ್ವೀಕರಿಸಿದ್ದು, ಅರ್ಜಿ ಸಲ್ಲಿಸಿದ ಎಲ್ಲಾ ಫಲಾನುಭವಿಗಳಿಗೆ ಬಸ್‌ಪಾಸ್ ವಿತರಿಸಲಾಗಿರುತ್ತದೆ. |

**ಕಾಇ 126 ಎಲ್‌ಇಟಿ 2023**

*(ಅರಬೈಲ್ ಶಿವರಾಂ ಹೆಬ್ಬಾರ್)*
**ಕಾರ್ಮಿಕ ಸಚಿವರು**

ಅನುಬಂಧ-01

ಪ್ರಾರಂಭದಿಂದ ಇಲ್ಲಿಯವರೆಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಫಲಾನುಭವಿಗಳಿಗಾಗಿ ನೋಂದಣಿಯಾದ ಫಲಾನುಭವಿಗಳ ಜಿಲ್ಲಾವಾರು ವಿವರ

| ಕ್ರ.ಸಂ | ಜಿಲ್ಲೆ | ಮೊತ್ತ |
|---|---|---|
| 1 | ಬಾಗಲಕೋಟೆ | 120936 |
| 2 | ಬೆಂಗಳೂರು ಗ್ರಾಮಾಂತರ | 18735 |
| 3 | ಬೆಂಗಳೂರು ನಗರ | 349871 |
| 4 | ಬೆಳಗಾವಿ | 181729 |
| 5 | ಬಳ್ಳಾರಿ | 87631 |
| 6 | ಬೀದರ್ | 192209 |
| 7 | ಬಿಜಾಪುರ | 106927 |
| 8 | ಚಾಮರಾಜನಗರ | 46384 |
| 9 | ಚಿಕ್ಕಬಳ್ಳಾಪುರ | 41785 |
| 10 | ಚಿಕ್ಕಮಗಳೂರು | 83712 |
| 11 | ಚಿತ್ರದುರ್ಗ | 104986 |
| 12 | ದಕ್ಷಿಣ ಕನ್ನಡ | 71925 |
| 13 | ದಾವಣಗೆರೆ | 122296 |
| 14 | ಧಾರವಾಡ | 130662 |
| 15 | ಗದಗ | 78304 |
| 16 | ಗುಲ್ಬರ್ಗ | 273952 |
| 17 | ಹಾಸನ | 72156 |
| 18 | ಹಾವೇರಿ | 221777 |
| 19 | ಕೊಡಗು | 6392 |
| 20 | ಕೋಲಾರ | 83668 |
| 21 | ಕೊಪ್ಪಳ | 168324 |
| 22 | ಮಂಡ್ಯ | 28830 |
| 23 | ಮೈಸೂರು | 115859 |
| 24 | ರಾಯಚೂರು | 63777 |
| 25 | ರಾಮನಗರ | 44001 |
| 26 | ಶಿವಮೊಗ್ಗ | 97518 |
| 27 | ತುಮಕೂರು | 89199 |
| 28 | ಉಡುಪಿ | 54513 |
| 29 | ಉತ್ತರ ಕನ್ನಡ | 122903 |
| 30 | ಯಾದಗಿರಿ | 111646 |
| | **ಒಟ್ಟು** | **3292607** |

## ಅನುಬಂಧ-02

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯ ಧನ ನೀಡಲು ಈ ಕೆಳಕಂಡ 25 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ **ರೂ.3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.20,000/-** ವರೆಗೆ
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸಾಲ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ **ರೂ.50,000/-**
9. **ಶಿಶು ಪಾಲನಾ ಸೌಲಭ್ಯ: ಕಾರ್ಮಿಕರ ಮಕ್ಕಳ ಪಾಲನೆಗಾಗಿ ರಾಜ್ಯದದ್ಯಾಂತ 100 ಕಿತ್ತೂರು ರಾಣಿ ಚೆನ್ನಮ್ಮ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.71,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | **5,000** |
| 2 | 1 ರಿಂದ 4ನೇ ತರಗತಿ | **5,000** |
| 3 | 5 ರಿಂದ 8ನೇ ತರಗತಿ | **8,000** |
| 4 | 9 ಹಾಗೂ 10ನೇ ತರಗತಿ | **12,000** |
| | **ಪದವಿ ಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | **15,000** |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | **20,000** |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | **40,000** |
| 8 | ಡಿ.ಎಡ್ | **25,000** |
| | ಬಿ.ಎಡ್ | **35,000** |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | **25,000** |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | **30,000** |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | **35,000 ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು** |
| | **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | ಸದರಿ **ಕೋರ್ಸ್‌ನ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು** |

| | | |
|---|---|---|
| | | ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕ ರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/–** ರಿಂದ **ರೂ.20,000/–ವರೆಗೆ**
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/–**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/–** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/–**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ

ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ

15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.60,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತು ಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ನೋಂದಾಯಿತ ಫಲಾನುಭವಿಗಳಿಗೆ **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ವಿತರಣೆ**
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಟಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.
20. ಇಮ್ಯೂನಿಟಿ ಬೂಸ್ಟರ್ ಕಿಟ್ ವಿತರಣೆ
21. ಪ್ರಿವೆಂಟಿವ್ ಹೆಲ್ತ್‌ಕೇರ್ ಯೋಜನೆ
22. ಮೋಬೈಲ್ ಮೆಡಿಕಲ್ ಕೇರ್ ಯೂನಿಟ್
23. ಪೈಲಟ್ ಟ್ರೈನಿಂಗ್: ಫಲಾನುಭವಿಯ ಆಯ್ಕೆಯಾದ ಮಕ್ಕಳಿಗೆ
24. ವಿದೇಶದಲ್ಲಿ ವಿದ್ಯಾಭ್ಯಾಸಕ್ಕಾಗಿ ಶೈಕ್ಷಣಿಕ ಸಹಾಯ ಧನ ಸೌಲಭ್ಯ
25. ನ್ಯೂಟ್ರೀಶನ್ ಕಿಟ್ಸ್: